# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ವ್ಯಾಪಾರ ನಿಯಂತ್ರಣ) ನಿಯಮಗಳು-2019 ರಂತೆ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ **ಮೇಲ್ಮನವಿ ಪ್ರಾಧಿಕಾರ ಸಮಿತಿ (Appellate Committee)** ಕುರಿತು.

ಓದಲಾಗಿದೆ: 1. ಕರ್ನಾಟಕ ಬೀದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ವ್ಯಾಪಾರ ನಿಯಂತ್ರಣ) ಕಾಯ್ದೆ-2014, ದಿನಾಂಕ: 05.03.2014

2. ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ವ್ಯಾಪಾರ ನಿಯಂತ್ರಣ) ನಿಯಮಗಳು 2019, ದಿ:12.06.2019

3. ಅಭಿಯಾನ ನಿರ್ದೇಶಕರು, (ಡೇ-ನಲ್ಮ್) ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ ಇವರ ಏಕ ಕಡತ ಸಂ: ಅನಿಕ 282 ಡೇ-ನಲ್ಮ್ 2019-20 ರಲ್ಲಿ ಸಲ್ಲಿಸಿರುವ ಪ್ರಸ್ತಾವನೆಯಂತೆ.

*****

ಪ್ರಸ್ತಾವನೆ:

ಮೇಲೆ ಓದಲಾದ (1) ಮತ್ತು (2) ರಲ್ಲಿ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ನಿಯಂತ್ರಣ) ಅಧಿನಿಯಮ-2014 ರಲ್ಲಿನ 20ನೇ ಪ್ರಕರಣದ 1ನೇ ಉಪ ಪ್ರಕರಣದ ಅಡಿಯಲ್ಲಿ ಹಾಗೂ ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ವ್ಯಾಪಾರ ನಿಯಂತ್ರಣ) ನಿಯಮಗಳು-2019 ರ ಅಧ್ಯಾಯ-4 ರ ಕಲಂ ಸಂಖ್ಯೆ 22 ರಲ್ಲಿ ಪ್ರತಿಯೊಂದು ಸ್ಥಳೀಯ ಪ್ರಾಧಿಕಾರವು, ಸರ್ವಸದಸ್ಯರ ಸಭೆಯಲ್ಲಿ ನಿರ್ಧರಿಸಲಾದಂತೆ 23ನೇ ನಿಯಮದ ಮೇರೆಗೆ ಮೇಲ್ಮನವಿಗಳನ್ನು ವಿಚಾರಣೆ ಮಾಡುವುದಕ್ಕಾಗಿ ಮೇಲ್ಮನವಿ ಪ್ರಾಧಿಕಾರವಾಗಿ ಕಾರ್ಯನಿರ್ವಹಿಸುವುದಕ್ಕೆ ಸಂದರ್ಭಾನುಸಾರ, ಮೇಯರ್ ಅಥವ ಅಧ್ಯಕ್ಷರು ಅದರ ಅಧ್ಯಕ್ಷರಾಗಿರುವ ಮತ್ತು ಸ್ಥಳೀಯ ಪ್ರಾಧಿಕಾರದ ಇಬ್ಬರು ಇತರೆ ಸದಸ್ಯರನ್ನು ಒಳಗೊಂಡಿರುವ ಒಂದು ಸಮಿತಿಯೊಂದನ್ನು ರಚಿಸತಕ್ಕದ್ದೆಂದು ತಿಳಿಸಲಾಗಿರುತ್ತದೆ.

ಮೇಲೆ ಓದಲಾದ (3) ರಲ್ಲಿ ಅದರಂತೆ, ಮೇಲ್ಮನವಿ ಪ್ರಾಧಿಕಾರ ಸಮಿತಿಯನ್ನು ಸ್ಥಳೀಯ ಪ್ರಾಧಿಕಾರದ ಮೇಯರ್ ಅಥವ ಅಧ್ಯಕ್ಷರು ಅದರ ಅಧ್ಯಕ್ಷರಾಗಿರುವ ಮತ್ತು ಸ್ಥಳೀಯ ಪ್ರಾಧಿಕಾರದ ಇತರೆ ಇಬ್ಬರು ಸದಸ್ಯರನ್ನು ಒಳಗೊಂಡಿರುವ ಒಂದು ಸಮಿತಿಯನ್ನು ರಚಿಸಿ, ಆದೇಶಿಸುವಂತೆ ಕೋರಿ ಅಭಿಯಾನ ನಿರ್ದೇಶಕರು, ಡೇ-ನಲ್ಮ್ ಇವರು ಏಕ ಕಡತದಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೌಉಜೀಇ 86 ಉಜೀಇ 2020 ಬೆಂಗಳೂರು ದಿನಾಂಕ: 02.03.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ವ್ಯಾಪಾರ ನಿಯಂತ್ರಣ) ನಿಯಮಗಳು-2019 ರಂತೆ ಮೇಲ್ಮನವಿ ಪ್ರಾಧಿಕಾರ ಸಮಿತಿಯನ್ನು ಈ ಕೆಳಕಂಡಂತೆ ರಚಿಸಿ ಆದೇಶಿಸಿದೆ.

| ಕ್ರ.ಸಂ. | ಹುದ್ದೆಯ ಹೆಸರು | ಪದನಾಮ |
|---|---|---|
| 1 | ಮೇಯರ್/ಅಧ್ಯಕ್ಷರು | ಅಧ್ಯಕ್ಷರು |
| 2 | ಸಾಮಾನ್ಯ ಸಭೆಯಿಂದ ನಾಮ ನಿರ್ದೇಶಿತ ಇಬ್ಬರು ಸದಸ್ಯರು | ಸದಸ್ಯರು |

ಕುಂದುಕೊರತೆ ನಿವಾರಣಾ ಸಮಿತಿಯ ಮತ್ತು ಪಟ್ಟಣ ಮಾರಾಟ ಸಮಿತಿಯ ಆದೇಶ ಹಾಗೂ ತೀರ್ಮಾನದ ವಿರುದ್ಧ ಮೇಲ್ಮನವಿ:

(1) ಕುಂದುಕೊರತೆ ನಿವಾರಣಾ ಸಮಿತಿಯ ಮತ್ತು ಪಟ್ಟಣ ಮಾರಾಟ ಸಮಿತಿಯ ಆದೇಶ ಅಥವ ತೀರ್ಮಾನದ ವಿರುದ್ಧ ಬಾಧಿತ ವ್ಯಕ್ತಿಯು, ಅನುಕ್ರಮವಾಗಿ ನಮೂನೆ-VI ಮತ್ತು ನಮೂನೆ-V ರಲ್ಲಿ ಅಂತಹ ಆದೇಶ ಅಥವಾ ತೀರ್ಮಾನವನ್ನು ತಿಳಿಸಿದ ದಿನಾಂಕದಿಂದ ಮೂವತ್ತು ದಿನಗಳ ಅವಧಿಯೊಳಗಾಗಿ 22ನೇ ನಿಯಮದ ಅಡಿಯಲ್ಲಿ ರಚಿತವಾದ ಮೇಲ್ಮನವಿ ಪ್ರಾಧಿಕಾರಕ್ಕೆ ಮೇಲ್ಮನವಿಯನ್ನು ಸಲ್ಲಿಸತಕ್ಕದ್ದು.

ಪರಂತು ನಿಗಧಿತ ಸಮಯದೊಳಗಾಗಿ ಮೇಲ್ಮನವಿಯನ್ನು ಸಲ್ಲಿಸುವುದಕ್ಕೆ ಸಾಕಷ್ಟು ಯುಕ್ತ ಕಾರಣದಿಂದ ಅರ್ಜಿದಾರನಿಗೆ ಅಡ್ಡಿಯಾಗಿತ್ತು ಎಂದು ಮೇಲ್ಮನವಿ ಪ್ರಾಧಿಕಾರಕ್ಕೆ ಮನದಟ್ಟಾದರೆ, ಮೇಲ್ಮನವಿ ಪ್ರಾಧಿಕಾರವು ಆ ವಿಳಂಬವನ್ನು ಮನ್ನಿಸಬಹುದು.

(2) ಮೇಲ್ಮನವಿಯು ನಿವೇದನಾ ಪತ್ರದ ರೂಪದಲ್ಲಿರತಕ್ಕದ್ದು ಹಾಗೂ ಮೇಲ್ಮನವಿದಾರನು ಅದಕ್ಕೆ ಸಹಿ ಮಾಡಿರತಕ್ಕದ್ದು ಮತ್ತು ಅವನು ಅದನ್ನು ಖುದ್ದಾಗಿ ಅಥವಾ ತನ್ನ ಅಧಿಕೃತ ಪ್ರತಿನಿಧಿಯ ಮೂಲಕ ಸಂಬಂಧಪಟ್ಟ ಸ್ಥಳೀಯ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

(3)ಮೇಲ್ಮನವಿಯನ್ನು ಯಾವುದರ ವಿರುದ್ಧ ಸಲ್ಲಿಸಲಾಗಿದೆಯೋ ಆ ಆದೇಶದ ಮೂಲ ಪ್ರತಿಯನ್ನು ಅಥವಾ ಆ ಆದೇಶದ ಪ್ರಮಾಣೀಕೃತ ಪ್ರತಿ ಯಾವುದಾದರೂ ಇದ್ದರೆ, ಅದನ್ನು ಮೇಲ್ಮನವಿ ನಿವೇದನಾ ಪತ್ರದೊಂದಿಗೆ ಲಗತ್ತಿಸತಕ್ಕದ್ದು.

(4) ಮೇಲ್ಮನವಿಯು ತ್ರಿಪ್ರತಿಯಲ್ಲಿರತಕ್ಕದ್ದು ಹಾಗೂ ಇನ್ನೂರು ರೂಪಾಯಿಗಳ ಶುಲ್ಕದೊಂದಿಗೆ ಲಗತ್ತಾಗಿರತಕ್ಕದ್ದು.

(5) ಮೇಲ್ಮನವಿಯ ಪ್ರತಿಯನ್ನು ಅದರ ಸ್ವೀಕೃತಿಯ ಸಹಿತ ಪ್ರತಿವಾದಿಗೆ ಕೊಟ್ಟ ಹೊರತು ಅಂತಹ ಮೇಲ್ಮನವಿಯನ್ನು ಪುರಸ್ಕರಿಸತಕ್ಕದ್ದಲ್ಲ.

**ಮೇಲ್ಮನವಿ ಸಮಿತಿಯು ಮೇಲ್ಮನವಿಗಳನ್ನು ವಿಚಾರಣೆ ಮಾಡುವ ಕಾರ್ಯವಿಧಾನ:**

1) ಸಂಬಂಧಪಟ್ಟ ಸ್ಥಳೀಯ ಪ್ರಾಧಿಕಾರವು ಈ ಬಗ್ಗೆ ಅಧಿಕೃತಗೊಳಿಸಿದ ಅಧಿಕಾರಿಯು ಅಥವಾ ವ್ಯಕ್ತಿಯು, ಮೇಲ್ಮನವಿಯನ್ನು ನಮೂದು ಮಾಡುವ ಉದ್ದೇಶಕ್ಕಾಗಿ ಸಂಬಂಧಟ್ಟ ಸ್ಥಳೀಯ ಪ್ರಾಧಿಕಾರವು ಇಟ್ಟಿರುವ ರಿಜಿಸ್ಟರ್‌ನಲ್ಲಿ ಮೇಲ್ಮನವಿಯನ್ನು ಸಲ್ಲಿಸಿದ ದಿನಾಂಕದ ಸಹಿತ ನಮೂದಿಸತಕ್ಕದ್ದು.

2) 22ನೇ ನಿಯಮದ ಅಡಿಯಲ್ಲಿ ರಚಿಸಲಾದ ಮೇಲ್ಮನವಿ ಪ್ರಾಧಿಕಾರದ ಮುಂದೆ ಮೇಲ್ಮನವಿಯನ್ನು ಮಂಡಿಸತಕ್ಕದ್ದು. ಸಮಿತಿಯು ಮೇಲ್ಮನವಿಯ ವಿಚಾರಣೆಗೆ ದಿನಾಂಕವನ್ನು ನಿಗದಿಪಡಿಸತಕ್ಕದ್ದು, ಆ ದಿನಾಂಕವು ಮೇಲ್ಮನವಿಯನ್ನು ದಾಖಲಿಸಿದ ದಿನಾಂಕದಿಂದ ಮೂವತ್ತು ದಿನಗಳನ್ನು ಮೀರತಕ್ಕದ್ದಲ್ಲ ಮತ್ತು ಸಂಬಂಧಪಟ್ಟವರಿಗೆ ವಿಚಾರಣೆಯ ನೋಟೀಸನ್ನು ಹಾರಿ ಮಾಡಿಸತಕ್ಕದ್ದು.

3) ಮೇಲ್ಮನವಿ ಸಮಿತಿಯ ಮುಂದೆ ಸಂಬಂಧಪಟ್ಟವರು ಮಂಡಿಸಿರುವ ವಾದಗಳು ಮತ್ತು ಪ್ರಕರಣದ ದಾಖಲೆಗಳ ಆಧಾರದ ಮೇಲೆ, ಮೇಲ್ಮನವಿ ಸಮಿತಿಯು ಮೇಲ್ಮನವಿಯನ್ನು ಸ್ವೀಕರಿಸಿದ ದಿನಾಂಕದಿಂದ ಅರವತ್ತು ದಿನಗಳೊಳಗಾಗಿ ಲಿಖಿತದಲ್ಲಿ ಕಾರಣಗಳನ್ನು ದಾಖಲಿಸಿ ಸೂಕ್ತವೆಂದು ನಿರ್ಧರಿಸಬಹುದಾದಂಥ ಆದೇಶವನ್ನು ಮಾಡತಕ್ಕದ್ದು.

ಈ ಆದೇಶವನ್ನು ಕಾನೂನು ಇಲಾಖೆಯ ಟಿಪ್ಪಣಿ ಸಂಖ್ಯೆ: 240 ಅಭಿ 2021, ದಿನಾಂಕ: 28.02.202ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

02/03/2022

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

3. ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ.
5. ಎಲ್ಲಾ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು / ಅಪರ ಮುಖ್ಯ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ., ಬೆಂಗಳೂರು.
7. ಜಂಟಿ ಕಾರ್ಯದರ್ಶಿಗಳು, ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ, ನವದೆಹಲಿ.
8. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ, ಬೆಂಗಳೂರು.
9. ಅಭಿಯಾನ ನಿರ್ದೇಶಕರು, ಡೇ-ನಲ್ಮ್, ಬೆಂಗಳೂರು.
10. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ.ಟವರ್, ಬೆಂಗಳೂರು.
11. ಖಜಾನಾಧಿಕಾರಿ, ರಾಜ್ಯಹುಜೂರ್ ಖಜಾನೆ, ಬೆಂಗಳೂರು.
12. ಎಲ್ಲಾ ಜಿಲ್ಲಾಧಿಕಾರಿಗಳು,
13. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
14. ಆಯುಕ್ತರು/ಪೌರಾಯುಕ್ತರು/ಮುಖ್ಯಾಧಿಕಾರಿಗಳು
15. ಆರ್.ಬಿ.ಐ.ನ ರಾಜ್ಯ ಪ್ರತಿನಿಧಿ.
16. ರಾಜ್ಯ ಸಂಚಾಲಯಕರು, ಎಸ್.ಎಲ್.ಬಿ.ಸಿ..
17. ಜಿಲ್ಲಾ ಲೀಡ್ ಬ್ಯಾಂಕ್ ಮುಖ್ಯಸ್ಥರು
18. ಸಿಡ್‌ಬಿ ಯ ರಾಜ್ಯ ಪ್ರತಿನಿಧಿ
19. ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿಯ ಸಂಚಾಲಕರು
20. ಪೌರಾಯುಕ್ತರು (ಇ.ಓ.)
21. ಎಸ್.ಬಿ.ಎಫ್.ಸಿ/ಎಂ.ಎಫ್.ಐ.
22. ಪ್ರದೇಶ ಮತ್ತು ನಗರ ಮಟ್ಟದ ಒಕ್ಕೂಟದ ಪ್ರತಿನಿಧಿಗಳು
23. ಸಮುದಾಯ ಸಂಘಟನಾಧಿಕಾರಿ/ ಸಮುದಾಯ ಸಂಘಟಕರು.
24. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
25. ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
26. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಉಜೀ ಇಲಾಖೆ
27. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಉಜೀ ಇಲಾಖೆ
28. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಉಜೀ ಇಲಾಖೆ
29. ಶಾಖಾ ರಕ್ಷ ಕಡತ /ಹೆಚ್ಚುವರಿ ಪ್ರತಿ.